## ಮಾನ್ಯ ವಿಧಾನ ಪರಿಷತ್‌ಸದಸ್ಯರಾದ ಡಿ.ಟಿ. ಶ್ರೀನಿವಾಸ ಇವರ ಶೂನ್ಯ ವೇಳೆ ಸೂಚನೆಗೆ ಉತ್ತರ

**ವಿಷಯ:**

ಶಾಲಾ ಮಕ್ಕಳಲ್ಲಿ ಪೋನ್ ಬಳಕೆ ಸಂಪೂರ್ಣ ನಿಷೇದಿಸುವುದು ಅಪೇಕ್ಷಿಯವಲ್ಲ. ಮತ್ತು ಕಾರ್ಯರೂಪಕ್ಕೆ ತರಲು ಎಂದು ಸಾಧ್ಯವಿಲ್ಲ ಎಂದು ದೆಹಲಿ ಹೈ ಕೋರ್ಟ್ ಹೇಳಿದೆ. ಮಕ್ಕಳು ಮೊಬೈಲ್ ಫೋನ್ ಬಳಸುವುದರ ಮೇಲೆ ನಿಯಂತ್ರಣ ಹೇರಬೇಕು ಎಂದು ನ್ಯಾಯಮೂರ್ತಿ ಅನುಪ್ ಜೈರಾಮ್ ಭಂಭಾನಿ ರವರು ತಮ್ಮ ಆದೇಶದಲ್ಲಿ ತಿಳಿಸಿರುತ್ತಾರೆ. ಶಾಲಾ ಮಕ್ಕಳು ಮೊಬೈಲ್ ಫೋನ್ ಬಳಸುವುದನ್ನು ನಿಯಂತ್ರಿಸಲು ಕೆಲವು ಮಾರ್ಗಸೂಚಿಗಳನ್ನು ಹೈ ಕೋರ್ಟ್ ನಿಗಧಿಪಡಿಸಿತು. ಜವಾಬ್ದಾರಿಯುತ ಆನ್‌ಲೈನ್ ನಡವಳಿಕೆ, ಡಿಜಿಟಲ್ ಸಂಬಂಧಿಸಿದ ನೀತಿ ಸೂತ್ರಗಳ ಬಗ್ಗೆ ಶಾಲಾ ಮಕ್ಕಳಿಗೆ ಶಿಕ್ಷಣ ತುಂಬಾ ಪ್ರಾಮುಖ್ಯತೆವಾಗಿರುವುದರಿಂದ ಒತ್ತು ನೀಡಬೇಕು ಎಂದು ಆದೇಶದಲ್ಲಿ ತಿಳಿಸಲಾಗಿದೆ. ಶೈಕ್ಷಣಿಕ ಮತ್ತು ಅದಕ್ಕೆ ಸಂಬಂಧಿಸಿರುವುದಿರಿಂದ ಶಿಕ್ಷಣ ತುಂಬಾ ಪ್ರಾಮುಖ್ಯತೆ ಹೊಂದಿರುವುದರಿಂದ ಶಾಲೆಗಳಲ್ಲಿ ಮೊಬೈಲ್ ಫೋನ್‌ನ್ನು ಬಳಸುವುದನ್ನು ನಿಷೇದಿಸಬೇಕು. ಈ ಬಗ್ಗೆ ಸದನದಲ್ಲಿ ಚರ್ಚಿಸಲು ಶೂನ್ಯ ವೇಳೆಯಲ್ಲಿ ಅವಕಾಶ ಕಲ್ಪಿಸಿಕೊಡಬೇಕೆಂದು ಈ ಮೂಲಕ ತಮ್ಮನ್ನು ಕೋರುತ್ತೇನೆ.

**ಉತ್ತರ:**

ಶಾಲೆಗಳಲ್ಲಿ ಮೊಬೈಲ್‌ಫೋನ್‌ಗಳ ಬಳಕೆಯಿಂದ ಬೋಧನಾ ಚಟುವಟಿಕಗಳಿಗೆ ತೊಂದರೆಯಾಗುತ್ತಿರುವುದನ್ನು ಗಮನಿಸಿ ಶಾಲೆಗಳಲ್ಲಿ ಬೋಧನೆ ಮತ್ತು ಕಲಿಕೆಗೆ ಉತ್ತಮ ವಾತಾವರಣವನ್ನು ಕಲ್ಪಿಸುವ ಸಲುವಾಗಿ ಮೊಬೈಲ್‌ಬಳಕೆಯನ್ನು ನಿಷೇಧಿಸುವುದು ಸೂಕ್ತವೆಂದು ತೀರ್ಮಾನಿಸಿ ಬೋಧನಾ ಅವಧಿಯಲ್ಲಿ ಯಾವುದೇ ಶಿಕ್ಷಕರು ಮೊಬೈಲ್‌ಬಳಸದಂತೆ ಕಟ್ಟು ನಿಟ್ಟಾಗಿ ನಿಷೇಧಿಸಿ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತಾಲಯದಿಂದ ದಿನಾಂಕ: 09.05.2018 ರಲ್ಲಿ ಸುತ್ತೋಲೆ ಹೊರಡಿಸಲಾಗಿದೆ. ( ಪ್ರತಿ ಲಗತ್ತಿಸಿದೆ).

ಮುಂದುವರೆದು, ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಮೊಬೈಲ್ ಬಳಸಲು ಅವಕಾಶವಿರುವುದಿಲ್ಲ, ಮನೆಗಳಲ್ಲಿಯೂ ಸಹ ವಿದ್ಯಾರ್ಥಿಗಳು ಮೊಬೈಲ್ ಬಳಕೆಯನ್ನು ಕೇವಲ ಶೈಕ್ಷಣಿಕ ವಿಷಯಗಳಿಗೆ ಸಂಬಂಧಿಸಿದಂತೆ ಮಾತ್ರ ಸೀಮಿತವಾಗಿ ಬಳಕೆ ಮಾಡುವಂತೆ ಹಾಗೂ ಮಕ್ಕಳ ಮೊಬೈಲ್ ಬಳಕೆ ಕುರಿತು ನಿರಂತರ ನಿಗಾ ವಹಿಸುವಂತೆ ಪಾಲಕರ ಸಭೆಗಳಲ್ಲಿ ವಿದ್ಯಾರ್ಥಿಗಳ ಪಾಲಕರಿಗೆ ಮನವರಿಕೆ ಮಾಡಿಕೊಡಲಾಗುತ್ತಿದೆ.

**ಸಂಖ್ಯೆ:**ಇಪಿ 26 ಪಿಎಂಎ 2025

(ಎಸ್.ಮಧು ಬಂಗಾರಪ್ಪ)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು